ಮೇಕೆದಾಟು ತಂಗುದಾಣವನ್ನು ಅಭಿವೃದ್ಧಿಗೊಳಿಸುವ ಕುರಿತು

೩೯೭. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).— ಮಾನ್ಯ ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಇಲಾಖಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೇಕೆದಾಟು ಒಂದು ಪ್ರವಾಸಿ ಸ್ಥಳವೆಂದು ಸರ್ಕಾರ ಘೋಷಿಸಿದೆಯೇ ?

ಆ) ಹಾಗಿದ್ದಲ್ಲಿ, ಅಲ್ಲಿ ಪ್ರವಾಸಿಗರಿಗೆ ಒದಗಿಸಿರುವ ಸೌಲಭ್ಯಗಳೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವಾ ಇಲಾಖಾ ಸಚಿವರು).—

ಅ) ಹೌದು.

ಆ) ಈವರೆವಿಗೂ ಅಲ್ಲಿ ಪ್ರವಾಸಿ ಸೌಲಭ್ಯಗಳಿರಲಿಲ್ಲ. ಈಗ ಪ್ರವಾಸೋದ್ಯಮ ಇಲಾಖೆಯು ತಾಲ್ಲೂಕು ಅಭಿವೃದ್ಧಿ ಮಂಡಲಿಯ ನಾಲ್ಕು ಕೊಠಡಿಗಳುಳ್ಳ ಮುಸಾಫಿರ್‌ಖಾನಾ ಕಟ್ಟಡವನ್ನು ತೆಗೆದುಕೊಂಡು ಅದನ್ನು ನವೀಕರಿಸಲು ಕ್ರಮ ಕೈಗೊಂಡಿದ್ದು ಕೆಲಸವು ಮುಕ್ತಾಯದ ಹಂತದಲ್ಲಿದೆ. ಅಲ್ಲದೆ ಅಡುಗೆ ಕೋಣೆ ಮತ್ತು ಊಟದ ಸಭಾಂಗಣವನ್ನು ಕಟ್ಟಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಶಹಾಪುರ ತಾಲ್ಲೂಕಿನ ಮುನ್ಸೀಫ್ ಮ್ಯಾಜಿಸ್ಟ್ರೇಟರ ಕಛೇರಿ ಕಟ್ಟಡದ ಬಗ್ಗೆ

೧೭೨. ಶ್ರೀ ಶಿವಶೇಖರಗೌಡ (ಶಹಾಪುರ).— ಮಾನ್ಯ ಕಾನೂನು, ಸಂಸದೀಯ ವ್ಯವಹಾರ, ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಲ್ಬುರ್ಗಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಮುನ್ಸೀಫ್ ಮ್ಯಾಜಿಸ್ಟ್ರೇಟರ ಕಛೇರಿಕಟ್ಟಡದ ಸಲುವಾಗಿ ಎಷ್ಟು ಎಕರೆ ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ?

ಆ) ಹಾಗಿದ್ದಲ್ಲಿ, ಜಮೀನಿನ ಮೂಲೀಕರಿಗೆ ಪರಿಹಾರ ಧನ ಕೊಡಲಾಗಿದೆಯೇ ?

ಇ) ಹಾಗಿದ್ದಲ್ಲಿ ಮುನ್ಸೀಫ್ ಮ್ಯಾಜಿಸ್ಟ್ರೇಟರ ಕಛೇರಿ ಕಟ್ಟಡ ನಿರ್ಮಾಣ ಕಾರ್ಯವನ್ನು ಎಂದಿನಿಂದ ಪ್ರಾರಂಭಿಸಲಾಗುವುದು ?

ಶ್ರೀ ಎಂ. ವೀರಪ್ಪ ಮೊಯಿಲಿ (ವಾರ್ತಾ, ಪ್ರವಾಸೋದ್ಯಮ ಕಾನೂನು ಸಂಸದೀಯ ವ್ಯವಹಾರ ಮತ್ತು ಯುವಜನ ಸೇವಾ ಸಚಿವರು)

ಅ) ಶಹಾಪುರ ತಾಲ್ಲೂಕಿನ ಹಳ್ಳಿಸಾಗರ ಗ್ರಾಮದಲ್ಲಿನ ಸರ್ವೆ ನಂ. ೩೮೬ರಲ್ಲಿನ ೬ ಎಕರೆ ಜಮೀನು.

ಆ) ಇಲ್ಲ.

ಇ) ನಕ್ಷೆ ಮತ್ತು ಅಂದಾಜುಗಳಿಗೆ ಮಂಜೂರಾತಿ ನೀಡಿದ ತದನಂತರ.

ಬೈಲಹೊಂಗಲದಲ್ಲಿರುವ ವೀರರಾಣಿ ಕಿತ್ತೂರ ಚೆನ್ನಮ್ಮನ ಸಮಾಧಿಗೆ ಹೊನಲು ಬೆಳಕು ಅಳವಡಿಸುವ ಕುರಿತು

೩೬೮. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ).— ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಯೋಜನಾ, ವಾರ್ತಾ, ಪ್ರವಾಸೋದ್ಯಮ, ಯುವಜನ ಸೇವೆ, ವಾಣಿಜ್ಯ, ಮತ್ತು ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೈಲಹೊಂಗಲ ನಗರದಲ್ಲಿ ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಬೈಲಹೊಂಗಲದಲ್ಲಿರುವ ವೀರರಾಣಿ ಕಿತ್ತೂರ ಚೆನ್ನಮ್ಮನ ಸಮಾಧಿಗೆ ಹೊನಲು ಬೆಳಕಿನ ವ್ಯವಸ್ಥೆ ಅಳವಡಿಸುವ ಬಗ್ಗೆ ದಿ. ೨೪-೩-೯೯ರಂದು ಸರಕಾರದ ಆಜ್ಞೆ ಹೊರಡಿಸಲಾಗಿದೆಯೇ ?